# ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ, ನವಲಗುಂದ.

| | |
|---|---|
| ಸಿ.ಸಿ. ನಂಬರ್ | : 844/2024 |
| ಸಿ.ಡಬ್ಲ್ಯೂ | : 03 |
| ಪಿ.ಡಬ್ಲ್ಯೂ | : 02 |
| ಸಾಕ್ಷಿಯ ಹೆಸರು | : ರಮೇಶ ಮಹಾದೇವಪ್ಪ ಗಿರಿಯಣ್ಣವರ |
| ವಯಸ್ಸು | : 28 ವರ್ಷ |
| ಉದ್ಯೋಗ | : ಚಾಲಕ |
| ವಾಸ ಸ್ಥಳ | : ಬಸಾಪುರ |

ದಿನಾಂಕಃ 17/07/2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-**

ಪ್ರಕರಣದ ಆರೋಪಿ ಪರಿಚಯವಿದೆ. ಚಾಸಾ-2 ರವರ ಪರಿಚಯ ಇದೆ. ಈ ಪ್ರಕರಣದ ಕುರಿತು ನನಗೆ ಏನು ಮಾಹಿತಿ ಇರುವದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವದೇ ಪಂಚನಾಮೆ ಮಾಡಿರುವದಿಲ್ಲ ಮತ್ತು ಯಾವುದೇ ವಸ್ತುವನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಸಾಕ್ಷಿ ನೋಡಿ ಗುರುತಿಸಿದ ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಸದರಿ ನಿಪಿ-1 ರಲ್ಲಿ ಏನು ಬರೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲಾ. ಸದರಿ ಸಹಿಯನ್ನು ಪೋಲಿಸ ಠಾಣೆಯಲ್ಲಿ ಮಾಡಿರುತ್ತೇನೆ.

(ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಲು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಸರಕಾರಿ ಸಹಾಯಕ ಅಭಿಯೋಜಕರಿಂದ –**

ದಿಃ 04-03-2024 ರಂದು ರಾ.08.00 ರಿಂದ 09.00 ಗಂಟೆಯವರೆಗೆ ಬಸಾಪೂರ ಗ್ರಾಮದ ದುಂಡಿ ಬಸವೇಶ್ವರ ದೇವಸ್ಥಾನದ ಮುಂದಿನ ಸಾರ್ವಜನಿಕ ಸ್ಥಳದಲ್ಲಿ

ಆರೋಪಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ಬಗ್ಗೆ ಚಾಸಾ-1 ರವರು ಕರೆದ ಮೇರೆಗೆ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪಂಚನಾಮೆ ಪೂರೈಸಿ ಆರೋಪಿಯ ತಾಬಾದಿಂದ ಮದ್ಯ ಪೌಚಗಳನ್ನು ಜಪ್ತಿ ಪಡಿಸಿಕೊಂಡು ಅವುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ಜಪ್ತಿ ಪಡಿಸಿಕೊಂಡು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀಮತಿ ಪಿ ಸಿ ಎಚ್ ವಕೀಲರಿಂದ</u>**

ಏನು ಇಲ್ಲಾ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ. ಹೇ. ಕೇ. ಸರಿ. ಇದೆ.**

**C/c. ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ**
**ನವಲಗುಂದ.**